ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

16 ಜೂನ್, 2026 ಮಂಗಳವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ : 97 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ಪ್ರಧಾನಿ ನರೇಂದ್ರ ಮೋದಿ ಹಾಗೂ ಸ್ಲೊವಾಕಿಯಾ ಪ್ರಧಾನಿ ರಾಬರ್ಟ್ ಫಿಕೊ ಅವರು ದ್ವಿಪಕ್ಷೀಯ ಮಾತುಕತೆ ನಡೆಸುವ ಮೂಲಕ ವಲಸೆ, ಡಿಜಿಟಲ್ ತಂತ್ರಜ್ಞಾನ ಹಾಗೂ ರಕ್ಷಣಾ ಕ್ಷೇತ್ರ ಸೇರಿ ಒಟ್ಟು 11 ಒಪ್ಪಂದಗಳಿಗೆ ಸೋಮವಾರ ಸಹಿ ಹಾಕಿದ್ದಾರೆ.


ಎಲ್ಲರ ತಲೆಯೊಳಗಿರುವ ಅವನೊಬ್ಬ ವಿಚಿತ್ರ ಇತಿಹಾಸಕಾರ ! » 2


ಮಧ್ಯಪ್ರಾಚ್ಯ ಸಂಘರ್ಷ ಅಂತ್ಯ : ಮೋದಿ ಮೆಚ್ಚುಗೆ » 3


ಮತಪಟ್ಟಿಯಿಂದ ಯಾರು ಹೊರಗುಳಿಯದಿರಲಿ » 4

# ಬರ ಪರಿಸ್ಥಿತಿ ಎದುರಾಗಬಹುದು ಸಜ್ಜಾಗಿ

## ಹಣಕಾಸಿನ ನೆರವು ಯೋಜನೆ ರೂಪಿಸಿ | ಕೃಷಿ, ತೋಟಗಾರಿಕೆ, ರೇಷ್ಮೆ ಇಲಾಖೆಗೆ ಸಿಎಂ ಸೂಚನೆ

• ಪ್ರಜೋದಯ ವರದಿ

**ಬೆಂಗಳೂರು :** ರಾಜ್ಯದಲ್ಲಿ ಮುಂಗಾರು ಸಮರ್ಪಕವಾಗಿ ಬಾರದೇ ಕೃಷಿಗೆ ತೊಂದರೆಯಾಗಬಹುದು. ಪರ್ಯಾಯ ವ್ಯವಸ್ಥೆಗಳನ್ನು ರೂಪಿಸಿಕೊಳ್ಳಲು ಕೃಷಿ ಇಲಾಖೆ ಮುಂದಾಗಬೇಕು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸೂಚನೆ ನೀಡಿದರು.

ಸೋಮವಾರ ಕೃಷಿ, ರೇಷ್ಮೆ, ತೋಟಗಾರಿಕೆ, ಮೀನುಗಾರಿಕೆ ಇಲಾಖೆ ಕಾರ್ಯದರ್ಶಿಗಳು, ಹಿರಿಯ ಅಧಿಕಾರಿಗಳ ಸಭೆಯನ್ನು ನಡೆಸಿದ ಅವರು, ಬಿತ್ತನೆ ಬೀಜ, ರಸಗೊಬ್ಬರ ಸಮರ್ಪಕ ಪೂರೈಕೆಗೆ ಒತ್ತು ನೀಡಬೇಕು. ರೈತರಿಗೆ ಅಗತ್ಯ ಮಾಹಿತಿ ನೀಡಿ ಜಾಗೃತಿ ಮೂಡಿಸಬೇಕು. ಅತಿವೃಷ್ಟಿ, ಅನಾವೃಷ್ಟಿ ಎದುರಿಸಲು ಸನ್ನದ್ಧರಾಗಬೇಕು. ಕ್ರಿಮಿನಾಶಕ ಮತ್ತಿತರ ಔಷಧ ಸಿಂಪರಣೆ ಸಲಕರಣೆಗಳ ನೆರವನ್ನು ರೈತರಿಗೆ ಒದಗಿಸಬೇಕು.



ಇದಕ್ಕೆ ಹಣಕಾಸಿನ ನೆರವು ಸಂಬಂಧ ಅಗತ್ಯ ಯೋಜನೆ ರೂಪಿಸಿ, ಚರ್ಚಿಸಬೇಕೆಂದು ತಿಳಿಸಿದರು.

**ಇತರೆ ರಾಜ್ಯದ ಮಾದರಿ ಗಮನಿಸಿ**

ಇತರೆ ರಾಜ್ಯಗಳಲ್ಲಿರುವ ಮಾದರಿ ಯೋಜನೆ, ಮಾರ್ಗಗಳನ್ನು ಅಧ್ಯಯನ ಮಾಡಿ ರಾಜ್ಯದ ಕೃಷಿ ಸಂಸ್ಕೃತಿ ಮತ್ತು ಬೆಳೆ ಮಾದರಿಗಳಿಗೆ ಅನುಗುಣವಾಗಿ ಕಾರ್ಯರೂಪಕ್ಕೆ ತನ್ನಿ. ಡ್ರೋಣ್, ಎಐ ಮತ್ತಿತರ ಆಧುನಿಕ ತಂತ್ರಜ್ಞಾನವನ್ನು ರೈತರಿಗೆ ತಲುಪಿಸುವ ವ್ಯವಸ್ಥೆ ಮಾಡಿ. ಪ್ರಕೃತಿ ವೈಪರೀತ್ಯಗಳಿಂದ ರೈತರ ಕೃಷಿ ಚಟುವಟಿಕೆಗೆ ತೊಂದರೆ ಆಗದಂತೆ ಕ್ರಮ ವಹಿಸಬೇಕು ಎಂದರು.

ತಾಲ್ಲೂಕು ಮತ್ತು ಹೋಬಳಿ ಮಟ್ಟದಲ್ಲಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಿ. ಪ್ರಾಥಮಿಕ ಕೃಷಿ ಜೊತೆ ಸೆಕೆಂಡರಿ ಕೃಷಿ ಸೇರಿ ರೈತರ ಆದಾಯ ಹೆಚ್ಚಿಸಲು ಈಗಾಗಲೇ ಸೂಚಿಸಿರುವ ಕ್ರಮಗಳನ್ನು ಸಮರ್ಪಕವಾಗಿ ಜಾರಿ ಮಾಡಿ. ಕೃಷಿ ಇಲಾಖೆ ಅಧೀನದಲ್ಲಿರುವ ಐದು ನಿಗಮ ಮತ್ತು ಮಂಡಳಿಗಳ ಸ್ಥಿತಿಗತಿ ಅಧ್ಯಯನ ನಡೆಸಿ ವರದಿ ನೀಡಿ ಎಂದು ಸೂಚನೆ ನೀಡಿದರು.

**ವರದಿ ನೀಡಲು ನಿರ್ದೇಶನ**

ರೈತರಿಗೆ ನೀಡಬೇಕಾದ ಪೂರಕ ಮಾಹಿತಿಗಳನ್ನು ವರದಿಯಲ್ಲಿ ಉಲ್ಲೇಖಿಸಿ. ರಾಜ್ಯದಲ್ಲಿರುವ ಕೋಲ್ಡ್ ಸ್ಟೋರೇಜ್ ಮತ್ತು ಗೋದಾಮುಗಳ ಬಗ್ಗೆ ಪಟ್ಟಿ ಕೊಡಿ. ರೈತರಿಗೆ ಸಬ್ಸಿಡಿ ದರದಲ್ಲಿ ಕೊಟ್ಟಿರುವ ಸವಲತ್ತುಗಳು ಎಷ್ಟು ಪ್ರಯೋಜನಕಾರಿಯಾಗಿವೆ ಎನ್ನುವ ಬಗ್ಗೆ ಪರಿಶೀಲನೆ ನಡೆಸಿ. ಸಬ್ಸಿಡಿ ನೀಡಿರುವ ಉದ್ದೇಶ ಜಾರಿ ಆಗುತ್ತಿದೆಯೇ ಎಂಬುದರ ಬಗ್ಗೆ ವರದಿ ನೀಡಿ ಎಂದು ನಿರ್ದೇಶಿಸಿದರು.

» ನಾಲ್ಕನೇ ಪುಟದಲ್ಲಿ

### ಸಹಕಾರ ಸಾಲ ದುರುಪಯೋಗ ಸಲ್ಲದು

ಸಹಕಾರ ಇಲಾಖೆ ಅಡಿಯಲ್ಲಿ ಯಾವ್ಯಾವ ಸಂಸ್ಥೆಗಳಿಗೆ ಚುನಾವಣೆ ಆಗಬೇಕಿದೆಯೋ ಎಲ್ಲದಕ್ಕೂ ಚುನಾವಣೆ ಮಾಡಿ. ಕಾಸ್ಕಾರ್ಡ್ ಬ್ಯಾಂಕ್‌ಗಳು ಕೊಡುವ ಬಡ್ಡಿ ರಹಿತ ಸಾಲದ ಸೌಲಭ್ಯ ಅಗತ್ಯವಿರುವವರಿಗೆ ತಲುಪುತ್ತಿಲ್ಲ. ಬ್ಯಾಂಕ್‌ನವರೇ ತಮಗೆ ಬೇಕಾದವರ ಹೆಸರಲ್ಲಿ ಸಾಲ ಪಡೆಯುತ್ತಿದ್ದಾರೆ. ರೈತರಿಗೆ ವಂಚನೆ ಆಗಲು ಬಿಡಬಾರದು. 5 ಲಕ್ಷದವರೆಗೂ ಬಡ್ಡಿ ರಹಿತ ಸಾಲ ಸೌಲಭ್ಯ ದುರುಪಯೋಗ ಆಗುತ್ತಿರುವ ಬಗ್ಗೆ ರೈತರು ನನ್ನ ಬಳಿ ಬಂದು ದೂರುತ್ತಿದ್ದಾರೆ. ಇದಕ್ಕೆ ಕಟ್ಟು ನಿಟ್ಟಿನ ತಡೆ ಹಾಕಬೇಕು. ಅಗತ್ಯವಿರುವ ಫಲಾನುಭವಿಗಳಿಗೆ ಸಾಲ ಸವಲತ್ತು ತಲುಪುವಂತೆ ಕ್ರಮ ವಹಿಸಬೇಕೆಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸೂಚನೆ ನೀಡಿದರು.

# ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಪರಿಶೀಲಿಸಿದ ಡಿ.ಸಿ.

• ಪ್ರಜೋದಯ ವರದಿ

**ಸಕಲೇಶಪುರ:** ಮಳೆಗಾಲ ಸಂದರ್ಭದಲ್ಲಿ ರಾಷ್ಟ್ರೀಯ ಹೆದ್ದಾರಿ 75ರಲ್ಲಿ ಭೂಕುಸಿತ ಮತ್ತು ರಸ್ತೆ ಹಾನಿ ಸಮಸ್ಯೆಗಳನ್ನು ತಡೆಗಟ್ಟಲು ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಯನ್ನು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಸೋಮವಾರ ಪರಿಶೀಲಿಸಿದರು.

ಪಟ್ಟಣದ ಗುರುವೇಗೌಡ ಕಲ್ಯಾಣ ಮಂಟಪದಲ್ಲಿ ನಡೆದ ಎಸ್‌ಐಆರ್ ತರಬೇತಿ ಕಾರ್ಯಕ್ರಮ ಬಳಿಕ ಅಧಿಕಾರಿಗಳೊಂದಿಗೆ ರಾಷ್ಟ್ರೀಯ ಹೆದ್ದಾರಿಗೆ ಭೇಟಿ ನೀಡಿ ಸ್ಥಳೀಯರು ಹಾಗು ಅಧಿಕಾರಿಗಳಿಂದ ಮಾಹಿತಿ ಪಡೆದರು.

ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ, ಸಂಭವನೀಯ ಪ್ರಕೃತಿ ವಿಕೋಪ ಎದುರಿಸಲು ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ. ಸುಮಾರು 64 ಕಡೆ ಭೂಕುಸಿತ ತಡೆಗೆ ಕ್ರಮ ವಹಿಸಲಾಗಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಮಂಜರಾಬಾದ್ ಕೋಟೆ ಸಮೀಪದ ರಸ್ತೆ ಕಾಮಗಾರಿ ಉತ್ತಮವಾಗಿ ಪೂರ್ಣಗೊಂಡಿದ್ದು, ಈ ಭಾಗದಲ್ಲಿ ರಸ್ತೆ ಸಂಚಾರ ವ್ಯವಸ್ಥೆ ಸುಧಾರಿಸಿದೆ. ತಡೆಗೋಡೆಗಳು ಹಾಗು ಗ್ಯಾಬಿಯನ್ ವಾಲ್ ನಿರ್ಮಾಣ ಸೇರಿ ಹಲವು ಕಾಮಗಾರಿ ಪ್ರಗತಿಯಲ್ಲಿವೆ ಎಂದರು.



ಆನೆಮಹಲ್ ಪ್ರದೇಶದಲ್ಲಿ ಕಳೆದ ವರ್ಷ ಭೂಕುಸಿತದಿಂದ ಹೆಚ್ಚಿನ ಸಮಸ್ಯೆ ಎದುರಾಗಿದ್ದವು. ಈ ಹಿನ್ನಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಅಗತ್ಯ ಕಾಮಗಾರಿ ಈಗಾಗಲೇ ಕೈಗೆತ್ತಿಕೊಂಡಿದ್ದು, ಮಳೆಗಾಲ ಆರಂಭವಾಗಿರುವುದರಿಂದ ತ್ವರಿತವಾಗಿ ಕೆಲಸ ಮುಗಿಸುವಂತೆ ಸೂಚಿಸಿದರು.

ಎತ್ತಿನಹೊಳೆ ಯೋಜನೆ ವ್ಯಾಪ್ತಿಯ ವಿವಿಧ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗಿದೆ. ಜೂನ್ 15ರಿಂದ ಅ. 30ರ ವರೆಗೆ ನೀರು ಎತ್ತುವ ಕಾರ್ಯ ನಡೆಯಲಿದ್ದು, ಈ ಹಿನ್ನಲೆಯಲ್ಲಿ ಮೋಟಾರ್ ಹಾಗು ಪಂಪ್‌ಗಳ ಕಾರ್ಯಾರಂಭಕ್ಕೆ ಚಾಲನೆ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಯೋಜನೆಯ ವಿವಿಧ ಘಟಕಗಳ ಕಾರ್ಯಕ್ಷಮತೆ ಪರಿಶೀಲಿಸಿ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗಿದೆ. ನೀರು ಎತ್ತುವ ಪ್ರಕ್ರಿಯೆ ಸುಗಮವಾಗಿ ನಡೆಯಲು ಅಗತ್ಯ ಸೂಚನೆಗಳನ್ನು ನೀಡಲಾಗಿದೆ ಎಂದರು.

ಉಪ ವಿಭಾಗಾಧಿಕಾರಿ ಹುಲಿಮನೆ ತಿಮ್ಮಣ್ಣ, ತಹಶೀಲ್ದಾರ್ ಸುಪ್ರೀತಾ, ಇಂಜಿನೀಯರ್ ವೆಂಕಟೇಶ್, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಮೊಹಮ್ಮದ್ ಇಕ್ಬಾಲ್, ಪ್ರಮೋದ್, ರಾಷ್ಟ್ರೀಯ ಹೆದ್ದಾರಿಯ ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಸಲ್ಮಾಮತ್ತಿತರರಿದ್ದರು.

# 22 ಎಕರೆ ಡೀಮ್ಡ್ ಅರಣ್ಯ ಒತ್ತುವರಿ ತೆರವು

## ವಲಯ ಅರಣ್ಯಾಧಿಕಾರಿ ಹೇಮಂತ್ ಕುಮಾರ್ ನೇತೃತ್ವದಲ್ಲಿ ಕಾರ್ಯಾಚರಣೆ

• ಪ್ರಜೋದಯ ವರದಿ

**ಸಕಲೇಶಪುರ:** ತಾಲ್ಲೂಕಿನ ಹೊಡಚಹಳ್ಳಿ ಗ್ರಾಮದ ಡೀಮ್ಡ್ ಅರಣ್ಯ ಪ್ರದೇಶದಲ್ಲಿ ಅಕ್ರಮವಾಗಿ ತಂತಿ ಬೇಲಿ ಹಾಕಿಕೊಂಡು ಸ್ವಾಧೀನ ಪಡಿಸಿಕೊಳ್ಳಲು ಯತ್ನಿಸಿದ್ದ 22 ಎಕರೆ ಭೂ ಒತ್ತುವರಿಯನ್ನು ಅರಣ್ಯ ಇಲಾಖೆ ತೆರವುಗೊಳಿಸಿದೆ.

ಹೊಡಚಹಳ್ಳಿ ಗ್ರಾಮದ ಸರ್ವೆ ನಂ. 21 ಮತ್ತು 28 ರಲ್ಲಿ ಸಚಿನ್ ಹಾಗು ರಜಿತ್ ಎಂಬುವವರು ಡೀಮ್ಡ್ ಅರಣ್ಯ ಪ್ರದೇಶದ 22 ಎಕರೆ ಭೂಮಿಯನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡು ತಂತಿ ಬೇಲಿ ನಿರ್ಮಿಸಿರುವುದು ಇಲಾಖೆಯ ಗಮನಕ್ಕೆ ಬಂದಿತ್ತು. ಖಚಿತ ಮಾಹಿತಿ ಆಧರಿಸಿ ಸ್ಥಳಕ್ಕೆ ತೆರಳಿದ ಅಧಿಕಾರಿಗಳು ಅಕ್ರಮವಾಗಿ ಅಳವಡಿಸಿದ್ದ ಕಂಬಗಳನ್ನು ತೆರವು ಗೊಳಿಸಿ, ತಂತಿ ಬೇಲಿಯನ್ನು ವಶಕ್ಕೆ ಪಡೆದರು.

ಅರಣ್ಯ ಪ್ರದೇಶಗಳ ಮೇಲಿನ ಅತಿಕ್ರಮಣವು ಪರಿಸರ ಹಾಗು ಜೀವ ವೈವಿಧ್ಯಕ್ಕೆ ಧಕ್ಕೆ ಉಂಟು ಮಾಡುವ ಹಿನ್ನಲೆ ಅರಣ್ಯ ಭೂಮಿಯನ್ನು ಸಂರಕ್ಷಿಸುವ ಉದ್ದೇಶದಿಂದ ಇಲಾಖೆ ನಿರಂತರ ಕಾರ್ಯಾಚರಣೆ ನಡೆಸುತ್ತಿದೆ. ಅರಣ್ಯ ಭೂಮಿಯನ್ನು ಅತಿಕ್ರಮಿಸುವವರ ವಿರುದ್ಧ ಅರಣ್ಯ ಕಾಯ್ದೆಯಡಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.



> ರೆಸಾರ್ಟ್, ಹೋಂ ಸ್ಟೇ ನಿರ್ಮಾಣ ಉದ್ದೇಶದಿಂದ ಡೀಮ್ಡ್ ಅರಣ್ಯವನ್ನು ಒತ್ತುವರಿ ಮಾಡಿಕೊಳ್ಳುತ್ತಿರುವುದು ತಾಲ್ಲೂಕು ಭಾಗದಲ್ಲಿ ಕಂಡು ಬಂದಿದೆ. ಈ ಬಗ್ಗೆ ಮೇಲಾಧಿಕಾರಿಗಳ ಗಮನಕ್ಕೆ ತಂದು ಒತ್ತುವರಿ ತೆರವುಗೊಳಿಸಲಾಗಿದೆ. ಕಳೆದ ಎರಡು ವರ್ಷದಲ್ಲಿ 70 ಎಕರೆಗೂ ಹೆಚ್ಚು ಒತ್ತುವರಿ ತೆರವುಗೊಳಿಸಲಾಗಿದೆ.
>
> -ಹೇಮಂತ್ ಕುಮಾರ್, ಆರ್‌ಎಫ್‌ಒ

ಅರಣ್ಯ ಸಂಪತ್ತು ಹಾಗೂ ಸರ್ಕಾರಿ ಭೂಮಿಯ ರಕ್ಷಣೆಗೆ ಇಲಾಖೆ ಬದ್ಧವಾಗಿದ್ದು, ಅಕ್ರಮ ಒತ್ತುವರಿ ಮತ್ತು ಅರಣ್ಯ ನಾಶಕ್ಕೆ ಕಾರಣವಾಗುವ ಚಟುವಟಿಕೆಗಳ ವಿರುದ್ಧ ಮುಂದಿನ ದಿನಗಳಲ್ಲಿಯೂ ಕಟ್ಟುನಿಟ್ಟಿನ ಕ್ರಮ ಮುಂದುವರಿಯಲಿದೆ ಎಂದು ಅರಣ್ಯ ಇಲಾಖೆ ತಿಳಿಸಿದೆ.

ಉಪ ಅರಣ್ಯ ಸಂರಕ್ಷಣಾಧಿಕಾರಿ ಹಾಗು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಮಾರ್ಗದರ್ಶನದಲ್ಲಿ ಸಕಲೇಶಪುರ ವಲಯ ಅರಣ್ಯಾಧಿಕಾರಿ ಹೇಮಂತ್ ಕುಮಾರ್ ನೇತೃತ್ವದಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ಮತ್ತು ತ್ವರಿತ ಪ್ರತಿಕ್ರಿಯೆ ತಂಡ (ಆರ್‌ಆರ್‌ಟಿ) ಸದಸ್ಯರು ಕಾರ್ಯಾಚರಣೆ ನಡೆಸಿದರು.

# ಎತ್ತಿನಹೊಳೆಯಿಂದ ನೀರೆತ್ತುವ ಪ್ರಕ್ರಿಯೆ ಆರಂಭ

## ಬಯಲು ಸೀಮೆಗೆ ಹರಿಯಬೇಕಾದ ನೀರು ಈ ವರ್ಷವೂ ಮಾರಿಕಣಿವೆ ಪಾಲು


• ಪ್ರಜೋದಯ ವರದಿ

**ಹಾಸನ:** ಪಶ್ಚಿಮಘಟ್ಟದ ಮಲೆನಾಡು ತಪ್ಪಲಿನಿಂದ ಬಯಲು ಸೀಮೆಗೆ ನೀರೊದಗಿಸುವ ಎತ್ತಿನಹೊಳೆ ಯೋಜನೆ ಕಾಮಗಾರಿ ಪೂರ್ಣಗೊಳ್ಳದೇ ನೀರು ಈ ವರ್ಷವೂ ವಾಣಿವಿಲಾಸ ಸಾಗರ (ಮಾರಿಕಣಿವೆ) ಅಣೆಕಟ್ಟೆ ಪಾಲಾಗಲಿದೆ.

ಸಕಲೇಶಪುರ, ಬೇಲೂರು ಹಾಗು ಆಲೂರು ತಾಲ್ಲೂಕು ವ್ಯಾಪ್ತಿಯಲ್ಲಿ ಎತ್ತಿನಹೊಳೆ ಯೋಜನೆಯ ಗುರುತ್ವಾ ಕಾಲುವೆ 0 ಕಿ.ಮೀ ನಿಂದ 32.550 ಕಿ.ಮೀ.ವರೆಗಿನ ಕಾಮಗಾರಿಯು ಪೂರ್ಣಗೊಂಡಿದೆ. ಉಳಿದ ಕಾಮಗಾರಿಗೆ ಬೇಲೂರು ತಾಲ್ಲೂಕು ವ್ಯಾಪ್ತಿಯ ಅರಣ್ಯ ಪ್ರದೇಶದಲ್ಲಿ ಅಡ್ಡಿಯುಂಟಾಗಿರುವುದರಿಂದ ನಾಲೆ ಕಾಮಗಾರಿಗೆ ತೊಡಕುಂಟಾಗಿದೆ. ಹೀಗಾಗಿ ಈ ಬಾರಿಯುವ ಬಯಲು ಸೀಮೆಗೆ ಹರಿಯಬೇಕಾದರ ಎತ್ತಿನಹೊಳೆ ನೀರು ಹೇಮಾವತಿ, ವೇದಾವತಿ ನದಿಯನ್ನು ಸೇರಲಿದೆ.

ಎತ್ತಿನಹೊಳೆ ನೀರನ್ನು ಪ್ರಸಕ್ತ ಮುಂಗಾರಿನಲ್ಲಿ ನೀರನ್ನೆತ್ತಿ ಗುರುತ್ವಾ ಕಾಲುವೆಗೆ ಬಿಡಲು ಉದ್ದೇಶಿಸಲಾಗಿದೆ. ಮಳೆಯ ನೀರು ಗುಡ್ಡ ಪ್ರದೇಶದಿಂದ ಹಾಗು ಹೊಲ ತೋಟಗಳಿಂದ ಹೆಚ್ಚುವರಿ ನೀರು ಎತ್ತಿನಹೊಳೆ ಗುರುತ್ವಾ ಕಾಲುವೆಗೆ ಸೇರಲಿದೆ. ಸದ್ಯ ಎತ್ತಿನಹೊಳೆ ಗುರುತ್ವಾ ಕಾಲುವೆ 32.550 ಕಿ.ಮೀ. ವರೆಗಿನ ಕಾಮಗಾರಿಯು ಪೂರ್ಣ ಗೊಂಡಿದ್ದು, ನೀರಿನ ಚಾಲನೆ ಮತ್ತು ಮಳೆಯಿಂದ ಬರುತ್ತಿರುವ ಹೆಚ್ಚುವರಿ ನೀರನ್ನು ಕಾಲುವೆಯ ಮುಖಾಂತರ ಹೊರ ಹರಿಸಬೇಕಾಗಿರುವುದರಿಂದ 32 ಕಿ.ಮೀ.ನಲ್ಲಿ ಅಳವಡಿಸಿರುವ ಎಸ್ಕೇಪ್‌ನಿಂದ ನೀರನ್ನು ಕಾಗೇದಹಳ್ಳ ಮುಖಾಂತರ ಹರಿಸಿ ವೇದಾವತಿ ನದಿಯ ಕೊಳ್ಳಕ್ಕೆ ಬಿಡಲಾಗುವುದೆಂದು ವಿಶ್ವೇಶ್ವರಯ್ಯ ಜಲ ನಿಗಮದ ಎತ್ತಿನಹೊಳೆ ಯೋಜನಾ ವಿಭಾಗದ ಕಾರ್ಯಪಾಲಕ ಇಂಜಿನೀಯರ್ ತಿಳಿಸಿದ್ದಾರೆ.

ಕುಂಟುತ್ತಲೇ ಸಾಗುತ್ತಿರುವ ಎತ್ತಿನಹೊಳೆ ಯೋಜನೆಯ ವಿತರಣಾ ತೊಟ್ಟಿಗಳಿಂದ ನೀರನ್ನು ಮೇಲೆತ್ತುವ ಮೊದಲನೇ ಹಂತ ಯಶ್ವಿಗೊಂಡಿದೆ. ಕಾಲುವೆ ಮೂಲಕ ಉದ್ದೇಶಿತ ಪ್ರದೇಶಗಳಿಗೆ ನೀರುವ ಹರಿಸುವ 2ನೇ ಹಂತದ ಕಾಮಗಾರಿಗೆ ಅರಣ್ಯ ಇಲಾಖೆ ಅಡ್ಡಿಯಿಂದ ನೀರು ಅರಸೀಕೆರೆಗೆ ತಲುಪುವ ಮೊದಲೇ ಪ್ರಸ್ತಾವನೆಯೇ ಇಲ್ಲದ ವಾಣಿವಿಲಾಸ ಸಾಗರಕ್ಕೆ ನೀರನ್ನು ಹರಿಸಿ ಪೋಲು ಮಾಡಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ.



ಕಳೆದ ವರ್ಷ ಟ್ರಯಲ್ ರನ್ ನಡೆಸಿ 7-8 ಟಿಎಂಸಿಗೂ ಹೆಚ್ಚಿನ ನೀರನ್ನು ಮೇಲೆತ್ತಲಾಗಿತ್ತು. ಈ ನೀರನ್ನು ಬೇಲೂರು ತಾಲ್ಲೂಕಿನ ಹಲವು ಕೆರೆಗಳನ್ನು ತುಂಬಿಸಿ ಉಳಿದ ನೀರನ್ನು ಮಾರಿಕಣಿವೆ ಜಲಾಶಯಕ್ಕೆ ಹರಿಸಲಾಗಿತ್ತು. ಈ ವರ್ಷವೂ ಕಾಲುವೆ ಕಾಮಗಾರಿ ಅರ್ಧಕ್ಕೆ ನಿಂತಿರುವುದರಿಂದ ಕಳೆದ ಬಾರಿಯಂತೆ ಈ ವರ್ಷವು ಸಕಲೇಶಪುರ, ಆಲೂರು, ಬೇಲೂರು ತಾಲ್ಲೂಕು ಭಾಗದಲ್ಲಿ ಹಾದು ಹೋಗಿರುವ ಎತ್ತಿನಹೊಳೆ ಕಾಲುವೆ ಮೂಲಕ ಕಾಗೆದಹಳ್ಳ ಮೂಲಕ ವೇದಾವತಿ ನದಿಗೆ ನೀರು ಹರಿಸಲಾಗುತ್ತಿದೆ.

**ಸ್ಥಳೀಯರಿಗೆ ಸಂಕಷ್ಟ**

ಕಳೆದ ವರ್ಷ ಮಲೆನಾಡು ಭಾಗದಲ್ಲಿ ಧಾರಾಕಾರ ಮಳೆಯಾಗಿದ್ದರಿಂದ ಸಕಲೇಶಪುರ ತಾಲ್ಲೂಕಿನ ದೊಡ್ಡನಾಗರ ಬಳಿಯ ಚೆಕ್ ಡ್ಯಾಮ್‌ನಲ್ಲಿ ಸಂಗ್ರಹವಾಗಿರುವ ಭಾರೀ ಪ್ರಮಾಣದ ನೀರನ್ನು ಏಕಾಏಕಿ ಹೇಮಾವತಿ ಜಲಾಶಯಕ್ಕೆ ಹರಿಸಿದ್ದರಿಂದ ರಸ್ತೆ ಹಾಗು ತಡೆಗೋಡೆ ಕೊಚ್ಚಿ ಹೋಗಿತ್ತು. ರಸ್ತೆ ಸಂಪರ್ಕವಿಲ್ಲದೆ ರೈತರು ತಮ್ಮ ಜಮೀನು, ಕಾಫಿ ತೋಟಗಳಿಗೆ ತೆರಳಲು ಪರದಾಡುವ ಪರಿಸ್ಥಿತಿ ಎದುರಿಸಿದ್ದರು. ಏಕಾಏಕಿ 500 ರಿಂದ 1,000 ಕ್ಯೂಸೆಕ್ ನೀರು ಬಿಡುವುದರಿಂದ ಅಕ್ಕಪಕ್ಕದ ರೈತರ ಜಮೀನಿಗಳಿಗೆ ನೀರು ನುಗ್ಗಿಬೆಳೆ ಹಾನಿಯಾಗುತ್ತಿದೆ.

### ಅನಾಹುತಕ್ಕೆ ಜವಾಬ್ದಾರಿ ನಾವಲ್ಲ

ನೀರು ಹರಿಸುವ ಭಾಗದಲ್ಲಿ ದನ-ಕರುಗಳನ್ನು ಕಟ್ಟುವುದಾಗಲಿ, ಸಾರ್ವಜನಿಕರು ಸಂಚರಿಸುವುದಾಗಲಿ ಮಾಡಬಾರದು. ಸಾರ್ವಜನಿಕರ ಆಸ್ತಿ-ಪಾಸ್ತಿ ಮತ್ತು ಪ್ರಾಣಕ್ಕೆ ಹಾನಿಯಾಗುವ ಸಂಭವವಿರುತ್ತದೆ, ಈ ಕುರಿತಂತೆ ಯಾವುದೇ ತರಹದ ನಿರ್ಲಕ್ಷ್ಯಗಳಿಂದ ಅಪಘಾತ ಅಥವಾ ಹಾನಿ ಸಂಭವಿಸಿದರೆ ಅವರೇ ಜವಾಬ್ದಾರರಾಗಿರುತ್ತಾರೆ. ಸಾರ್ವಜನಿಕರ ನಿರ್ಲಕ್ಷ್ಯದಿಂದ ಆಗುವ ಅನಾಹುತಗಳಿಗೆ ವಿಶ್ವೇಶ್ವರಯ್ಯ ಜಲ ನಿಗಮ, ಜವಾಬ್ದಾರಿಯಾಗಿರುವುದಿಲ್ಲವೆಂಬ ಪ್ರಕಟಣೆ ಹೊರಡಿಸುವ ಮೂಲಕ ಅಧಿಕಾರಿಗಳು ಕೈತೊಳೆದುಕೊಂಡಿದ್ದಾರೆ.

# ಬೇರೆಯವರಿಗೆ ಉಸ್ತುವಾರಿ ವಹಿಸಿದರೆ ಜಿಲ್ಲೆ ತಬ್ಬಲಿ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಹೊರ ಜಿಲ್ಲೆಯವರಿಗೆ ಉಸ್ತುವಾರಿ ವಹಿಸಿದರೆ ಜಿಲ್ಲೆ ತಬ್ಬಲಿಯಾಗುತ್ತದೆ. ಸ್ಥಳೀಯ ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರಿಗೆ ಅವಕಾಶ ಕಲ್ಪಿಸಬೇಕೆಂದು ಮಾಜಿ ಶಾಸಕ ಸಿ.ಎಸ್.ಪುಟ್ಟೇಗೌಡ ಅವರು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿದ ಅವರು, ಜಿಲ್ಲೆಯು ರಾಜಕೀಯವಾಗಿ ನಿರ್ಲಕ್ಷ್ಯಕ್ಕೆ ಒಳಗಾಗಿದ್ದು, ತಬ್ಬಲಿಯ ಸ್ಥಿತಿ ನಿರ್ಮಾಣವಾಗಿದೆ. ಮಾಜಿ ಸಚಿವ ದಿ. ಹೆಚ್.ಸಿ.ಶ್ರೀಕಂಠಯ್ಯ ಅವರ ಆಡಳಿತದ ನಂತರ ಜಿಲ್ಲಾ ಕಾಂಗ್ರೆಸ್‌ನಲ್ಲಿ ಸಮರ್ಥ ರಾಜಕೀಯ ನಾಯಕತ್ವದ ಕೊರತೆ ಉಂಟಾಗಿದೆ. ಜಿಲ್ಲೆ ಅಭಿವೃದ್ಧಿಯ ಹಾದಿಯಲ್ಲಿ ಹಿಂದುಳಿದಿದೆ ಎಂದರು.




ಹಲವು ವರ್ಷಗಳಿಂದ ಸಮರ್ಪಕ ರಾಜಕೀಯ ಪ್ರತಿನಿಧಿತ್ವ ಹಾಗು ಆಡಳಿತಾತ್ಮಕ ಶಕ್ತಿಯಿಂದ ಜಿಲ್ಲೆ ವಂಚಿತವಾಗಿದೆ. ಕಾಂಗ್ರೆಸ್ ಪಕ್ಷವನ್ನು ಮತ್ತಷ್ಟು ಬಲಪಡಿಸಲು ಶಿವಲಿಂಗೇಗೌಡರಿಗೆ ಸಚಿವ ಸ್ಥಾನ ನೀಡಬೇಕೆಂದರು.

ಶಿವಲಿಂಗೇಗೌಡ ಅವರು ಕ್ಷೇತ್ರದಲ್ಲಿ ನಿರಂತರವಾಗಿ ಜನಪರ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದು ರೈತರು, ಬಡವರು ಹಾಗು ಸಾಮಾನ್ಯ ಜನರ ಸಮಸ್ಯೆಗಳಿಗೆ ಸ್ಪಂದಿಸುವ

» ನಾಲ್ಕನೇ ಪುಟದಲ್ಲಿ

# ಅಪರಿಚಿತ ವಾಹನ ಡಿಕ್ಕಿ: ಪಾದಚಾರಿ ಸಾವು

• ಪ್ರಜೋದಯ ವರದಿ

**ಅರಸೀಕೆರೆ:** ಅಪರಿಚಿತ ವಾಹನ ಡಿಕ್ಕಿಯಾಗಿ ಪಾದಚಾರಿಯೊಬ್ಬರು ಮೃತಪಟ್ಟಿರುವ ಘಟನೆ ತಾಲ್ಲೂಕಿನ ಗೊಲ್ಲರಹಳ್ಳಿ ಸಮೀಪ ನಡೆದಿದೆ.

ಬೇಲೂರು ತಾಲ್ಲೂಕು ಅರೇಹಳ್ಳಿ ಹೋಬಳಿ ಸಿದ್ದರಹಳ್ಳಿ ಗ್ರಾಮದ ನೀಲಶೆಟ್ಟಿ (58) ಮೃತ ಪಟ್ಟಿದ್ದಾರೆ. ಗಂಡಸಿಯಿಂದ ಗೊಲ್ಲರಹಳ್ಳಿ ಕಾಲ್ನಡಿಗೆಯಲ್ಲಿ ಹೋಗುತ್ತಿದ್ದಾಗ ಅರಸೀಕೆರೆ ಕಡೆಯಿಂದ ಬಂದ ಅಪರಿಚಿತ ವಾಹನ ಡಿಕ್ಕಿಯಾಗಿ ಗಂಭೀರ ಗಾಯಗೊಂಡ ನೀಲಶೆಟ್ಟಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಗಂಡಸಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಯುವತಿ ಕೊಂದು ತಲೆಮರೆಸಿಕೊಂಡಿದ್ದ ಆರೋಪಿ ಬಂಧನ

• ಪ್ರಜೋದಯ ವರದಿ

**ಸಕಲೇಶಪುರ:** ಯುವತಿಯನ್ನು ಹತ್ಯೆಗೈದು ಯಾರಿಗೂ ಸಂಶಯ ಬಾರದಂತೆ ಓಡಾಡಿಕೊಂಡಿದ್ದ ಯುವಕನನ್ನು ಬೆಂಗಳೂರಿನ ಶೇಷಾದ್ರಿಪುರಂ ಪೊಲೀಸರು ಭಾನುವಾರ ರಾತ್ರಿ ಬಂಧಿಸಿದ್ದಾರೆ.

ಪಟ್ಟಣದ ಅಗ್ರಹಾರ ಬಡಾವಣೆಯ ಶರತ್ ಬಂಧಿತ ಆರೋಪಿ. ಸಕಲೇಶಪುರದ ಎನ್.ಡಿ. ಅನುಷಾ ಎಂಬುವವರನ್ನು ಜೂ. 13ರಂದು ಕೊಲೆ ಮಾಡಿದ್ದ ಎನ್ನಲಾಗಿದೆ. ಇಬ್ಬರು ಹಲವು ವರ್ಷಗಳಿಂದ ಸಹ ಜೀವನ (ಲಿವ್ ಇನ್ ರಿಲೆಷನ್) ನಡೆಸುತ್ತಿದ್ದರು. ಬೆಂಗಳೂರಿನ ಶೇಷಾದ್ರಿಪುರಂನಲ್ಲಿ ಬಾಡಿಗೆ ಮನೆಯಲ್ಲಿ ವಾಸವಿದ್ದರು. ಯುವತಿಯನ್ನು ಕೊಲೆಗೈದ ಬಳಿಕ ತನ್ನ ಮೇಲೆ ಸಂಶಯ ಬರಬಾರದೆಂದು ಪಟ್ಟಣದಲ್ಲಿ ಓಡಾಡಿಕೊಂಡಿದ್ದ. ಕೊಲೆ ಬಳಿಕ ಶರತ್ ನಾಪತ್ತೆಯಾದ್ದರಿಂದ ಅನುಮಾನಗೊಂಡು ಪೊಲೀಸರು ಆತನ ಜಾಡು ಹಿಡಿದು ಬೆನ್ನತ್ತಿದ್ದರು.

ಸಕಲೇಶಪುರ ನಗರ ಠಾಣೆ ಇನ್ಸಪೆಕ್ಟರ್ ವಿ.ಸಿ.ವನರಾಜು ಮಾರ್ಗದರ್ಶನದಲ್ಲಿ ಸಿಬ್ಬಂದಿ ಪೃಥ್ವಿ ಹಾಗು ಮಧು ಅವರ ಸಹಕಾರದೊಂದಿಗೆ ಶೇಷಾದ್ರಿಪುರಂ ಠಾಣೆ ಪೊಲೀಸರು ತಡರಾತ್ರಿ ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಬಂಧಿಸಿದರು. ಕೊಲೆಗೆ ನಿಖರ ಕಾರಣ ತಿಳಿದುಬಂದಿಲ್ಲ.

# ನೀರು ಪಾಲಾಗಿದ್ದ ಯುವಕರಿಬ್ಬರ ಶವ ಪತ್ತೆ



• ಪ್ರಜೋದಯ ವರದಿ

**ಹಾಸನ:** ತಾಲ್ಲೂಕಿನ ಶೆಟ್ಟಿಹಳ್ಳಿ ಚರ್ಚ್ ವೀಕ್ಷಣೆ ಹೇಮಾವತಿ ನದಿ ಪಾಲಾಗಿದ್ದ ಇಬ್ಬರು ಯುವಕರ ಶವ ಪತ್ತೆಯಾಗಿದೆ.

ಬೆಂಗಳೂರಿನ ಗಿರಿ ನಗರದ ಚರಣ್ (20) ಹಾಗು ಮಿಲನ್ (23) ಅವರ ಶವಕ್ಕಾಗಿ ಭಾನುವಾರ ರಾತ್ರಿ 8ರ ವರೆಗೆ ಕಾರ್ಯಾಚರಣೆ ನಡೆಸಲಾಗಿತ್ತು. ರಾತ್ರಿಯಾದ್ದರಿಂದ ಶೋಧ ಸ್ಥಗಿತಗೊಳಿಸಿದ್ದ ಅಗ್ನಿಶಾಮಕ ಹಾಗು ಪೊಲೀಸ್ ಸಿಬ್ಬಂದಿ ಸೋಮವಾರ ಬೆಳಿಗ್ಗೆ 8 ಗಂಟೆ ವೇಳೆ ಶವಗಳನ್ನು ಹೊರತೆಗೆದರು. ಮಣಿಕಂಠ (20) ಎಂಬಾತನ ಶವ ಭಾನುವಾರವೇ ಸಿಕ್ಕಿತ್ತು. ಹಿಮ್ಸ್‌ನಲ್ಲಿ ಮರಣೋತ್ತರ ಪರೀಕ್ಷೆ ಬಳಿಕ ಕುಟುಂಬಸ್ಥರಿಗೆ ಹಸ್ತಾಂತರಿಸಲಾಯಿತು.

ಧರ್ಮಸ್ಥಳ ಪ್ರವಾಸಕ್ಕೆ ಬಂದಿದ್ದ 10 ಜನರ ತಂಡ ವಾಪಾಸ್ ಹೋಗುವಾಗ ಶೆಟ್ಟಿಹಳ್ಳಿ ಚರ್ಚ್ ವೀಕ್ಷಣೆಗಾಗಿ ಬಂದಿತ್ತು. ನೀರಿನಲ್ಲಿ ಆಟವಾಡುತ್ತಿದ್ದಾಗ ಘೋರ ದುರಂತ ಸಂಭವಿಸಿದೆ.

## ಜಿಲ್ಲೆಯಲ್ಲಿ ಶೇ.13 ಮಳೆ ಕೊರತೆ : 2.86 ಲ.ಹೆ. ಗುರಿಯಲ್ಲಿ ಕೇವಲ 29 ಸಾವಿರ ಹೆಕ್ಟೇರ್‌ನಲ್ಲಿ ಬಿತ್ತನೆ

# ಮಳೆ ಕೊರತೆ ಹೊಡೆತಕ್ಕೆ ಸಿಲುಕಿದ ಕೃಷಿ ಚಟುವಟಿಕೆ

-ಕೆ.ಪಿ.ಸಾಗರ್ ರಾಜು

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯಲ್ಲಿ ಪೂರ್ವ ಮುಂಗಾರು ಹಾಗು ಮುಂಗಾರು ಮಳೆ ನಿರೀಕ್ಷಿತ ಪ್ರಮಾಣದಲ್ಲಿ ಸುರಿಯದ ಪರಿಣಾಮ ಕೃಷಿ ಚಟುವಟಿಕೆಗೆ ತೀವ್ರ ಹಿನ್ನಡೆಯುಂಟಾಗಿದೆ. ಮಳೆಯ ಅಭಾವದಿಂದ ಬಿತ್ತನೆ ಕಾರ್ಯ ಕುಂಠಿತಗೊಂಡಿದ್ದು, ಈಗಾಗಲೇ ಬಿತ್ತನೆ ಮಾಡಿರುವ ಪ್ರದೇಶಗಳಲ್ಲೂ ಮೊಳಕೆಯೊಡೆದ ಬೆಳೆಗಳು ಒಣಗುವ ಆತಂಕ ರೈತರನ್ನು ಕಾಡುತ್ತಿದೆ. ಮಳೆ ಕೊರತೆ ಮುಂದುವರಿದರೆ ಜಿಲ್ಲೆಯ ಕೃಷಿ ಮೇಲೆ ಪ್ರತಿಕೂಲ ಪರಿಣಾಮ ಬೀಳಲಿದೆ.

ಜಿಲ್ಲೆಯಲ್ಲಿ ಜನವರಿಯಿಂದ ಜೂನ್ ಮಧ್ಯ ಭಾಗದವರೆಗೆ ಒಟ್ಟು 218 ಮಿ.ಮೀ. ಮಳೆಯಾಗಬೇಕಿದ್ದರೆ ಕೇವಲ 190 ಮಿ.ಮೀ. ಮಳೆಯಾಗಿದೆ. ಶೇ.13ರಷ್ಟು ಮಳೆ ಕೊರತೆ ದಾಖಲಾಗಿದೆ. ಹೊಳೆನರಸೀಪುರ ತಾಲ್ಲೂಕಿನಲ್ಲಿ ಶೇ. 38ರಷ್ಟು, ಅರಕಲಗೂಡುನಲ್ಲಿ ಶೇ.36 ರಷ್ಟು, ಹಾಸನದಲ್ಲಿ ಶೇ.34ರಷ್ಟು, ಬೇಲೂರಿನಲ್ಲಿ ಶೇ.29 ರಷ್ಟು ಹಾಗು ಆಲೂರಿನಲ್ಲಿ ಶೇ.28 ರಷ್ಟು ಮಳೆ ಕೊರತೆ ಕಂಡು ಬಂದಿದೆ. ಮಲೆನಾಡು ಪ್ರದೇಶವಾದ ಸಕಲೇಶಪುರದಲ್ಲೂ ಶೇ.9ರಷ್ಟು ಕೊರತೆ ದಾಖಲಾಗಿದೆ.




**ಬಿತ್ತನೆ ಗುರಿಗೆ ಭಾರೀ ಹಿನ್ನಡೆ**

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ 2.86 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡುವ ಗುರಿ ಹೊಂದಲಾಗಿದೆ. ಆದರೆ, ಜೂನ್ ಮಧ್ಯಭಾಗದವರೆಗೆ ಕೇವಲ 29,245 ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆ ಕಾರ್ಯ ನಡೆದಿದೆ. ಅಂದರೆ ಒಟ್ಟು ಗುರಿಯ ಶೇ.10ಕ್ಕೂ ಕಡಿಮೆ ಪ್ರದೇಶದಲ್ಲಿ ಮಾತ್ರ ಬಿತ್ತನೆ ಪೂರ್ಣಗೊಂಡಿದೆ.

ಏಕದಳ ಧಾನ್ಯಗಳಾದ ಮುಸುಕಿನ ಜೋಳ, ರಾಗಿ, ಭತ್ತ ಹಾಗು ಕಿರುಧಾನ್ಯಗಳನ್ನು 2.52 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯುವ ಗುರಿ ಹೊಂದ ಲಾಗಿದ್ದರೂ ಈವರೆಗೆ ಕೇವಲ 20,855 ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆ ನಡೆದಿದೆ. ದ್ವಿದಳ ಧಾನ್ಯಗಳ ಬಿತ್ತನೆಯೂ ಮಂದಗತಿಯಲ್ಲಿ ಸಾಗಿದ್ದು, 21,127 ಹೆಕ್ಟೇರ್ ಗುರಿಯ ಎದುರು ಕೇವಲ 3,235 ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆ ನಡೆದಿದೆ.

ಹಾಸನ ತಾಲ್ಲೂಕಿನಲ್ಲಿ 45,300 ಹೆಕ್ಟೇರ್ ಗುರಿಯ ಎದುರು 9,110 ಹೆಕ್ಟೇರ್ ಪ್ರದೇಶ ದಲ್ಲಿ ಬಿತ್ತನೆ ನಡೆದಿದ್ದು, ಇತರೆ ತಾಲ್ಲೂಕುಗಳಲ್ಲಿ ಪ್ರಗತಿ ಅತ್ಯಂತ ನಿಧಾನವಾಗಿದೆ. ಸಕಲೇಶಪುರ ತಾಲ್ಲೂಕಿನಲ್ಲಿ ಇನ್ನೂ ಬಿತ್ತನೆ ಆರಂಭವಾಗಲ್ಲ.

**ರೈತರಲ್ಲಿ ಹೆಚ್ಚಿದ ಆತಂಕ**

ಮುಂಗಾರು ಮಳೆ ಅವಲಂಬಿಸಿರುವ ರೈತರು ಜಮೀನು ಸಿದ್ಧಪಡಿಸಿ ಬೀಜ ಹಾಗು ರಸಗೊಬ್ಬರ ಖರೀದಿಗೆ ಸಾವಿರಾರು ರೂಪಾಯಿ ವೆಚ್ಚ ಮಾಡಿದ್ದಾರೆ. ಆರಂಭಿಕ ಮಳೆಯ ಆಧಾರದ ಮೇಲೆ ಕೆಲವು ಪ್ರದೇಶಗಳಲ್ಲಿ ಬಿತ್ತನೆ ಮಾಡಲಾಗಿದ್ದರೂ ನಂತರ ಮಳೆ ಕೈಕೊಟ್ಟ ಪರಿಣಾಮ ಬೀಜಗಳು ಭೂಮಿಯೊಳಗೆ ಒಣಗುವ ಸ್ಥಿತಿ ನಿರ್ಮಾಣವಾಗಿದೆ.

(ಜನವರಿ-ಜೂನ್ ತಿಂಗಳ ವರೆಗಿನ ಮಳೆ ವಿವರ)

| ತಾಲ್ಲೂಕು | ವಾಡಿಕೆಮಳೆ | ಬಂದಿರುವ ಮಳೆ | ಕೊರತೆ |
|---|---|---|---|
| ಆಲೂರು | 249 ಮಿ.ಮೀ. | 180 ಮಿ.ಮೀ. | ಶೇ.28 |
| ಅರಕಲಗೂಡು | 199 ಮಿ.ಮೀ. | 127 ಮಿ.ಮೀ. | ಶೇ.36 |
| ಅರಸೀಕೆರೆ | 192 ಮಿ. ಮೀ. | 212 ಮಿ.ಮಿ. | 000 |
| ಬೇಲೂರು | 250 ಮಿ.ಮೀ. | 177 ಮಿ.ಮೀ. | ಶೇ.29 |
| ಚನ್ನರಾಯಪಟ್ಟಣ | 187 ಮಿ.ಮೀ. | 210 ಮಿ.ಮೀ. | 000 |
| ಹಾಸನ | 207 ಮಿ. ಮೀ. | 136 ಮಿ.ಮೀ. | ಶೇ.34 |
| ಹೊಳೆನರಸೀಪುರ | 212 ಮಿ.ಮೀ. | 130 ಮಿ.ಮೀ. | ಶೇ.38 |
| ಸಕಲೇಶಪುರ | 309 ಮಿ.ಮೀ. | 282 ಮಿ.ಮೀ. | ಶೇ.9 |

ಮತ್ತೊಮ್ಮೆ ಬಿತ್ತನೆ ಮಾಡಬೇಕಾದ ಪರಿಸ್ಥಿತಿ ಎದುರಾದರೆ ರೈತರ ಮೇಲಿನ ಆರ್ಥಿಕ ಹೊರೆ ಹೆಚ್ಚಾಗಲಿದೆ.

ಜೋಳ ಬೆಳೆಯುವ ಪ್ರದೇಶಗಳಲ್ಲಿ ತೇವಾಂಶದ ಕೊರತೆ ಕಂಡು ಬಂದಿದ್ದು, ಮಳೆಯ ನಿರೀಕ್ಷೆಯಲ್ಲಿ ರೈತರು ಕಾಯುವಂತಾಗಿದೆ. ಕೃಷಿ ಚಟುವಟಿಕೆಗಳಿಗೆ ಬೇಕಾದಷ್ಟು ಮಳೆಯಾಗದಿದ್ದರೆ ಉತ್ಪಾದನೆ ಕುಸಿಯುವ ಆತಂಕ ವ್ಯಕ್ತವಾಗಿದೆ.

**ಜಲಾಶಯಗಳಲ್ಲೂ ನೀರಿಲ್ಲ**

ಮಳೆಯ ಕೊರತೆಯಿಂದ ಜಿಲ್ಲೆಯ ಪ್ರಮುಖ ಜಲಾಶಯಗಳು ಹಾಗು ಕೆರೆ- ಕಟ್ಟೆಗಳ ಒಳಹರಿವು ಕುಂಠಿತಗೊಂಡಿದೆ. ಹೇಮಾವತಿ ಹಾಗು ಯಗಚಿ ಜಲಾನಯನ ಪ್ರದೇಶಗಳಲ್ಲಿ ನಿರೀಕ್ಷಿತ ಮಳೆಯಾಗದಿರುವುದು ಮುಂದಿನ ದಿನಗಳಲ್ಲಿ ನೀರಾವರಿ ಮತ್ತು ಕುಡಿಯುವ ನೀರಿನ ನಿರ್ವಹಣೆಗೆ ಸವಾಲಾಗುವ ಸಾಧ್ಯತೆ ಇದೆ. ಜೂನ್ ಅಂತ್ಯದೊಳಗೆ ಉತ್ತಮ ಮಳೆಯಾಗದಿದ್ದರೆ ಮುಂಗಾರು ಹಂಗಾಮಿನ ಬೆಳೆ ವಿಸ್ತೀರ್ಣದಲ್ಲಿ ಮತ್ತಷ್ಟು ಕುಸಿತ ಉಂಟಾಗಬಹುದು.

(ಬಿತ್ತನೆ ವಿಸ್ತೀರ್ಣ ಮತ್ತು ಬಿತ್ತನೆ ಗುರಿ ಹೆಕ್ಟೇರ್‌ನಲ್ಲಿ )

| ತಾಲ್ಲೂಕು | ಬಿತ್ತನೆ | ಗುರಿ |
|---|---|---|
| ಆಲೂರು | 5,025 | 13,260 |
| ಅರಕಲಗೂಡು | 5,820 | 47,511 |
| ಅರಸೀಕೆರೆ | 815 | 67,629 |
| ಬೇಲೂರು | 490 | 21,825 |
| ಚನ್ನರಾಯಪಟ್ಟಣ | 475 | 52,332 |
| ಹಾಸನ | 9,110 | 45,300 |
| ಹೊಳೆನರಸೀಪುರ | 7,510 | 33,179 |
| ಸಕಲೇಶಪುರ | 000 | 5,150 |
| ಒಟ್ಟು | 29,245 | 2,86,186 |

# ನಿಲ್ದಾಣದಲ್ಲೇ ಪ್ರಯಾಣಿಕನಿಗೆ ಬಸ್ ಡಿಕ್ಕಿ

• ಪ್ರಜೋದಯ ವರದಿ

**ಹಾಸನ:** ಬಸ್‌ಗಾಗಿ ಕಾಯುತ್ತ ಕುಳಿತ್ತಿದ್ದ ಪ್ರಯಾಣಿಕನಿಗೆ ಬಸ್ ಡಿಕ್ಕಿ ಹೊಡೆದು ಗಂಭೀರವಾಗಿ ಗಾಯಗೊಂಡಿರುವ ಘಟನೆ ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ನಡೆದಿದೆ.

ಚಿಕ್ಕಮಗಳೂರು ಮೂಲದ ಮಂಜುನಾಥ್ ಗಾಯಗೊಂಡ ವ್ಯಕ್ತಿ. ಬೆಂಗಳೂರಿನಿಂದ ಧರ್ಮಸ್ಥಳಕ್ಕೆ ತೆರಳುತ್ತಿದ್ದ ಬಸ್, ಚಿಕ್ಕಮಗಳೂರಿಗೆ ತೆರಳಲು ಮಂಜುನಾಥ್ ಬಸ್ ನಿಲ್ದಾಣದಲ್ಲಿ ಬಸ್‌ಗಾಗಿ ಕಾಯುತ್ತ ಕುಳಿತಿದ್ದ ಸಂದರ್ಭದಲ್ಲಿ ಅತಿವೇಗದಿಂದ ಬಸ್ ಚಲಾಯಿಸಿಕೊಂಡು ಬಂದ ಚಾಲಕ ಡಿಕ್ಕಿ ಹೊಡೆದಿದ್ದಾನೆ.

ತೀವ್ರವಾಗಿ ಗಾಯಗೊಂಡಿರುವ ಮಂಜುನಾಥ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಹಗಲು ವೇಳೆಯಾಗಿದ್ದರೆ ದೊಡ್ಡ ಅನಾಹುತ ನಡೆಯುತ್ತಿತ್ತು ಎಂದು ಚಾಲಕನ ವಿರುದ್ಧ ಪ್ರಯಾಣಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿ, ಬಡಾವಣೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

CMYK CMYK CMYK CMYK

